## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರ ಹೆಸರು** : ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭಾ ಕ್ಷೇತ್ರ)

**ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ** : 1030 (1221)

**ಉತ್ತರಿಸಬೇಕಾದ ದಿನಾಂಕ** : 13.03.2026

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗುವ ಹಿನ್ನೆಲೆ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ ಸರ್ಕಾರ ಯಾವ ಯೋಜನೆ (ಆಕ್ಷನ್ ಪ್ಲಾನ್) ರೂಪಿಸಿದೆ; (ವಿವರ ಒದಗಿಸುವುದು) | ರಾಜ್ಯವು ಮೂಲತಃ ಶುಷ್ಕ ಪ್ರದೇಶವಾಗಿರುವುದರಿಂದ ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಹಾಲಿ ಇರುವ ಬಹುತೇಕ ಜಲಮೂಲಗಳು ಬತ್ತಿಹೋಗಿ ಗ್ರಾಮದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತದೆ. ಸದರಿ ಸಮಸ್ಯೆಯನ್ನು ದೈನಂದಿನ ಆಧಾರದ ಮೇಲೆ ಮೇಲ್ವಿಚಾರಣೆ ಮಾಡಲು ಕ್ರಮವಹಿಸಿದ್ದು, ಆದ್ದರಿಂದ ಗ್ರಾಮೀಣ ಪ್ರದೇಶದ ಜನರಿಗೆ ಬರ ಪರಿಸ್ಥಿತಿ ಎದುರಾದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ<br>• ಮೊದಲ ಆದ್ಯತೆಯಾಗಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಮುಖಾಂತರ ಪಡೆದು ಕುಡಿಯುವ ನೀರು ಒದಗಿಸುವಂತೆ ಸೂಚಿಸಲಾಗಿರುತ್ತದೆ.<br>• ಅಗತ್ಯವಿದ್ದಲ್ಲಿ, ಟ್ಯಾಂಕರ್‌ಗಳ ಮೂಲಕ ನೀರನ್ನು ಸರಬರಾಜು ಮಾಡುವಂತೆ ಸೂಚಿಸಲಾಗಿರುತ್ತದೆ.<br>• ಕೊಳವೆ ಬಾವಿಗಳನ್ನು ಫ್ಲಷಿಂಗ್ (Flushing) ಮಾಡಿ ಆಳಗೊಳಿಸಲು (Deepening) ಹಾಗೂ Hydrofracturing ಮಾಡಿ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.<br>• ಮುಂದುವರೆದು ಅನಿವಾರ್ಯ ಸಂದರ್ಭದಲ್ಲಿ ಕೊಳವೆಬಾವಿಗಳನ್ನು ಕೊರೆಯುವುದು ಅತ್ಯಗತ್ಯವೆಂದು ಕಂಡು ಬಂದಲ್ಲಿ, ಸಂಬಂಧಪಟ್ಟ ಜಿಯಾಲಜಿಸ್ಟ್ ವರದಿಯನುಸಾರ ಸೂಕ್ತ ಕ್ರಮ ಕೈಗೊಂಡು ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಇತರೇ ಅವಶ್ಯ |
| ಆ) | ಟ್ಯಾಂಕರ್ ಮೂಲಕ ನೀರು ಪೂರೈಕೆ, ಬೋರ್ವೆಲ್ ಪುನಶ್ಚೇತನ, ಹೊಸ ಕುಡಿಯುವ ನೀರಿನ ಯೋಜನೆಗಳು ಹಾಗೂ ನೀರು ಸಂರಕ್ಷಣೆ ಕ್ರಮಗಳ ಕುರಿತಂತೆ ಕೈಗೊಂಡಿರುವ ಕ್ರಮಗಳೇನು; | |

| | | |
|---|---|---|
| ಇ) | ಮುಂದಿನ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗದಂತೆ ತಡೆಗಟ್ಟಲು ಯಾವುದೇ ವಿಶೇಷ ಪ್ಯಾಕೇಜ್ ಅಥವಾ ತುರ್ತು ನಿಧಿ ಮೀಸಲಿಟ್ಟಿದೆಯೇ? (ವಿವರ ಒದಗಿಸುವುದು) | ಅಂಶಗಳನ್ನು ಒಳಗೊಂಡ ಕಾಮಗಾರಿಗಳನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.<br>• ಪ್ರಸ್ತುತ ಜಿಲ್ಲೆಗಳಿಂದ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಕೋರಿ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ನಿಯಮಾನುಸಾರ ಪರಿಶೀಲಿಸಿ, ಅನುದಾನ ಲಭ್ಯತೆಯನ್ನಾಧರಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.<br>• ರಾಜ್ಯದಲ್ಲಿ ಪ್ರಸ್ತುತ 19 ಜಿಲ್ಲೆಗಳ 164 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, 24 ಗ್ರಾಮಗಳಿಗೆ 88 ಟ್ಯಾಂಕರ್‌ಗಳ ಮುಖಾಂತರ ಹಾಗೂ 140 ಗ್ರಾಮಗಳಿಗೆ 145 ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ.<br><br>2026ನೇ ಸಾಲಿನ ಬೇಸಿಗೆಯಲ್ಲಿ ರಾಜ್ಯದ ಎಲ್ಲಾ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿಗೆ ತೊಂದರೆ ಉಂಟಾಗದಂತೆ ಸಮರ್ಪಕವಾಗಿ ಕುಡಿಯುವ ನೀರನ್ನು ಒದಗಿಸಲು ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾಡಳಿತದ ಸಮನ್ವಯದೊಂದಿಗೆ ಯಶಸ್ವಿಯಾಗಿ ಕ್ರಮ ಕೈಗೊಂಡು ಕುಡಿಯುವ ನೀರಿನ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚಿಸಲಾಗಿರುತ್ತದೆ. |

RDWSD/CE/TECH/143/2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು